# ಮಾಸ ಭವಿಷ್ಯ

**-ಅರುಣ ಪಿ. ಭಟ್**



**ಮೇಷ:** ಆರೋಗ್ಯದಲ್ಲಿ ಸಣ್ಣಪುಟ್ಟ ಏರುಪೇರು ಕಾಣಬಹುದು. ರಾಜಕಾರಣಿಗಳಿಗೆ ದೊಡ್ಡಮಟ್ಟದಲ್ಲಿ ಪ್ರಗತಿ ಆಗಬಹುದು. ಸಂಗಾತಿ ಜತೆಗೆ ಉದ್ವಿಗ್ನ ವಾತಾವರಣ, ಇದರಿಂದ ಮಾನಸಿಕವಾಗಿ ಕಿರಿಕಿರಿ ಆಗುತ್ತದೆ. ಹಣಕಾಸು ಸ್ಥಿತಿ ಚೆನ್ನಾಗಿರುತ್ತದೆ. ಇದರಿಂದ ಸಂತಸ ಹೊಂದುವಿರಿ. ಶುಭ: 9,12,22, ಅಶುಭ: 15,20,28.

**ವೃಷಭ:** ನಿಮ್ಮ ಸಾಮಾಜಿಕ ಹಾಗೂ ರಾಜಕೀಯದ ಬದುಕು ಅಭಿವೃದ್ಧಿಯಾಗುತ್ತಾ ಸಾಗುತ್ತದೆ. ತಿಂಗಳ ಮಧ್ಯಭಾಗದಲ್ಲಿ ಉದ್ಯೋಗಸ್ಥರಿಗೆ ಪ್ರಗತಿ ಕಾಣುತ್ತದೆ. ಆರೋಗ್ಯದಲ್ಲೂ ಚೇತರಿಕೆ ಕಾಣಿಸಿಕೊಳ್ಳುತ್ತದೆ. ತಿಂಗಳ ಅಂತ್ಯಕ್ಕೆ ಸರಿಯುತ್ತಾ ಆದಾಯ ಉತ್ತಮವಾಗುತ್ತದೆ. ಶುಭ: 10,14,29, ಅಶುಭ: 12,16,27.





**ಮಿಥುನ:** ವಿವೇಚನೆಯಿಂದ ಕಾರ್ಯಗಳಲ್ಲಿ ಪಾಲ್ಗೊಳ್ಳಿ. ಕೆಲವರ ಮಾತನ್ನು ನಂಬಿ ನಷ್ಟದ ವ್ಯವಹಾರದಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ, ಎಚ್ಚರವಿರಲಿ. ಸಹೋದರ ವಿಶ್ವಾಸಗಳನ್ನು ಪಡೆಯಲು ಪ್ರಯತ್ನಿಸುವುದು ಸೂಕ್ತ. ಹಣದ ಆದಾಯ ಹೆಚ್ಚುವ ಅವಕಾಶ ವಿಪುಲವಾಗಿದೆ. ಶುಭ: 10,14,26, ಅಶುಭ: 13,18,25.

**ಕರ್ಕ:** ನಿರುದ್ಯೋಗಿಗಳಿಗೆ ಉದ್ಯೋಗದ ಅವಕಾಶಗಳು ಕಂಡುಬರಲಿವೆ. ಹಣಕಾಸು ವ್ಯವಹಾರಗಳು ಯೋಜಿತವಾಗಿ ನಡೆಯಲಿದೆ. ಕುಟುಂಬದಲ್ಲಿ ಶುಭ ಸುದ್ದಿ ಬರಲಿದೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರಗತಿಗೆ ಹಲವು ಅಡ್ಡಿ– ಆತಂಕ ಎದುರಾಗಲಿದೆ. ಶುಭ: 12,16,18, ಅಶುಭ: 11,19,22.





**ಸಿಂಹ:** ಕೆಲಸದ ವಿಷಯದಲ್ಲಿ ಸಮಸ್ಯೆಗಳು ಉದ್ಭವವಾಗಲಿವೆ. ಆದಷ್ಟು ಸಮಸ್ಯೆಗಳನ್ನು ಆ ಕ್ಷಣದಲ್ಲೇ ಬಗೆಹರಿಸಲು ಪ್ರಯತ್ನಿಸಿ. ಒತ್ತಡಭರಿತ ವಿಚಾರಗಳಿಂದ ಖಿನ್ನತೆ ಆವರಿಸಲಿದೆ. ಆದಷ್ಟು ದೈಹಿಕ ಮತ್ತು ಮಾನಸಿಕವಾಗಿ ಚೈತನ್ಯವಾಗಿರುವಂತೆ ನೋಡಿಕೊಳ್ಳಿ. ಶುಭ: 9,18,26, ಅಶುಭ.: 11,21,29.

**ಕನ್ಯಾ:** ಯೋಜಿತ ಕಾರ್ಯಗಳಲ್ಲಿ ವ್ಯವಸ್ಥಿತವಾದ ಕಾರ್ಯಶೈಲಿ ಕಂಡು ಬರುತ್ತದೆ. ಧನಾಗಮನ ವ್ಯವಸ್ಥೆ ಸರಾಗವಾಗಿ ನಡೆಯಲಿದೆ. ಕುಟುಂಬದ ಜೊತೆಗೆ ಹೆಚ್ಚಿನ ಕಾಲ ಕಳೆಯಲಿದ್ದೀರಿ. ಆತ್ಮೀಯರೊಡನೆ ಮನಸ್ತಾಪ ಆಗದಂತೆ ನೋಡಿಕೊಳ್ಳುವುದು ಒಳ್ಳೆಯದು. ಶುಭ: 10,18,24, ಅಶುಭ: 11,19,27.





**ತುಲಾ:** ಜನಪ್ರಿಯತೆ ಹೆಚ್ಚಾದಂತೆ ವಿರೋಧಿಗಳು ಹೆಚ್ಚಾಗಲಿದ್ದಾರೆ. ವೈಯಕ್ತಿಕ ವಿಚಾರಗಳನ್ನು ಯಾರೊಂದಿಗೂ ಹಂಚಿಕೊಳ್ಳಬೇಡಿ. ನಿಮ್ಮ ಆಲೋಚನೆಯನ್ನು ಕ್ಷುಲ್ಲಕ ವಿಚಾರಗಳಿಗೆ ಹರಿಸಬೇಡಿ, ಆರ್ಥಿಕ ವಿಷಯದಲ್ಲಿ ಸಂತೃಪ್ತಿ ಭಾವನೆ ಮೂಡಲಿದೆ. ಶುಭ: 10,18,29, ಅಶುಭ: 12,19,27.

**ವೃಶ್ಚಿಕ:** ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ನಿಮ್ಮ ನಿರೀಕ್ಷೆಗಳಂತೆ ಆರ್ಥಿಕವಾಗಿ ಪ್ರಬಲರಾಗುವ ಸಾಧ್ಯತೆ ಕಂಡು ಬರುತ್ತದೆ. ಶುಭ: 9,19,29, ಅಶುಭ: 11,15,22.





**ಧನು:** ಮಾನಸಿಕ ಕ್ಲೇಶಗಳು ನಿಮ್ಮ ಅಭಿವೃದ್ಧಿಗೆ ಮಾರಕವಾಗಬಹುದು. ಆರೋಗ್ಯದಲ್ಲಿ ವ್ಯತ್ಯಾಸ ಕಾಣಬಹುದು. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಕೆಲವರಿಂದ ನಿಮ್ಮ ಕಾರ್ಯಗಳಲ್ಲಿ ಹಸ್ತಕ್ಷೇಪ ಕಂಡುಬರುತ್ತದೆ. ಶುಭ: 12,16,29, ಅಶುಭ: 10,17,26.

**ಮಕರ:** ಉದ್ಯೋಗದಲ್ಲಿ ಉತ್ತಮ ಸ್ಥಾನಮಾನ ಸಿಗಲಿದೆ. ದಾಂಪತ್ಯದಲ್ಲಿ ಪ್ರೀತಿಯ ಮನಸ್ಥಿತಿಯಿಂದ ಇರಲಿದ್ದೀರಿ. ಸಹೋದ್ಯೋಗಿಗಳ ಜತೆ ಮುಖ್ಯವಾದ ಚರ್ಚೆ ನಡೆಸಲಿದ್ದೀರಿ. ಸಂಗಾತಿ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಉದ್ಯೋಗದಲ್ಲಿ ನಿರೀಕ್ಷಿತ ಯಶಸ್ಸು ಸಿಗಲಿದೆ. ಶುಭ: 13,19,28, ಅಶುಭ: 11,17,26.





**ಕುಂಭ:** ಪತ್ನಿಯೊಡನೆ ಅತಿ ಹೆಚ್ಚು ಕೋಪ ಕಲಹಗಳಲ್ಲಿ ಪಾಲ್ಗೊಳ್ಳಬೇಡಿ. ದಿಢೀರ್ ಆಗಿ ಹಣಕಾಸಿನ ವೆಚ್ಚ ಹೆಚ್ಚಾಗಲಿದೆ. ವೃತ್ತಿಗೆ ಸಂಬಂಧಿಸಿದಂತೆ ಯಾವುದೇ ವಿಚಾರದಲ್ಲಿ ನಿರ್ಲಕ್ಷ್ಯ ಮಾಡಬೇಡಿ. ಕೌಟುಂಬಿಕ ನೆಮ್ಮದಿಯ ಕಾರಣಕ್ಕೆ ಯಶಸ್ಸು ನಿಮ್ಮ ಪಾಲಿಗೆ ದೊರೆಯಲಿದೆ. ಶುಭ: 9,14,26, ಅಶುಭ: 11,15,27.

**ಮೀನ:**ಆರ್ಥಿಕ ಯೋಜನೆಗಳ ಫಲಿತಾಂಶ ವಿಳಂಬವಾಗುವ ಸಾಧ್ಯತೆ ಇದೆ. ನೀವು ಈಗಾಗಲೇ ಮಾಡಿದ ಒಳ್ಳೆಯ ಕೆಲಸಕ್ಕೆ ಮೆಚ್ಚುಗೆ, ಮನ್ನಣೆ, ಪುರಸ್ಕಾರಗಳು ಲಭಿಸಲಿವೆ. ಕೌಟುಂಬಿಕ ಜೀವನ ಆರಾಮವಾಗಿರುತ್ತದೆ. ಈಗಿನ ಕೆಲಸದ ಜತೆಗೆ ಮತ್ತೊಂದು ಕೆಲಸವನ್ನು ಒಪ್ಪಿಕೊಳ್ಳಲಿದ್ದೀರಿ. ಶುಭ: 6,14,22. ಅಶುಭ: 12,18,29.

